# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1117 |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 25.07.2024 |
| ಉತ್ತರಿಸುವ ಸಚಿವರು | : | ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ಸರ್ಕಾರದ ವಿವಿಧ ಹುದ್ದೆಗಳ ನೇಮಕಾತಿಯಲ್ಲಿ ಹಾಗೂ ಬಡ್ತಿ ನೀಡುವ ಸಂದರ್ಭದಲ್ಲಿ 371(ಜೆ) ಮೀಸಲಾತಿಯನ್ನು ಕಡೆಗಣಿಸಲಾಗುತ್ತಿದೆಯೇ; ಪ್ರಸ್ತುತ ಸರ್ಕಾರವು 371(ಜೆ) ಮೀಸಲಾತಿಯಡಿ ನೇಮಕಾತಿ ಮಾಡಿಕೊಳ್ಳುವಾಗ ಮತ್ತು ಬಡ್ತಿ ನೀಡುವಾಗ ಯಾವ ಯಾವ ನಿಯಮಗಳನ್ನು ಅನುಸರಿಸುತ್ತಿದೆ; | ಸರ್ಕಾರದ ವಿವಿಧ ಹುದ್ದೆಗಳ ನೇಮಕಾತಿಯಲ್ಲಿ ಹಾಗೂ ಬಡ್ತಿ ನೀಡುವ ಸಂದರ್ಭದಲ್ಲಿ 371(ಜೆ) ಮೀಸಲಾತಿಯನ್ನು ಕಡೆಗಣಿಸಲಾಗುತ್ತಿಲ್ಲ. ಪ್ರಸ್ತುತ ಸರ್ಕಾರವು 371(ಜೆ)ಅಡಿ ನೇಮಕಾತಿ ಮಾಡಿಕೊಳ್ಳುವಾಗ ಮತ್ತು ಬಡ್ತಿ ನೀಡುವಾಗ ಈ ಕೆಳಕಂಡ ಆದೇಶ ಮತ್ತು ನಿಯಮಗಳನ್ನು ಪಾಲಿಸಲಾಗುತ್ತಿದೆ.<br>1. ಕರ್ನಾಟಕ ಸಾರ್ವಜನಿಕ ಉದ್ಯೋಗ(ಹೈದ್ರಾಬಾದ್ ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ 2013.<br>2. ಕರ್ನಾಟಕ ಸಾರ್ವಜನಿಕ ಉದ್ಯೋಗ (ಸ್ಥಳೀಯ ವೃಂದಗಳ ರಚನೆ, ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆ )ನಿಯಮ 2013.<br><br>ಮೇಲಿನ ಆದೇಶದ ಕಂಡಿಕೆ 3ರಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದ ವ್ಯಾಪ್ತಿಯಲ್ಲಿ ಮಂಜೂರಾಗಿರುವ ಹುದ್ದೆಗಳಲ್ಲಿ ಗ್ರೂಪ್-ಎ ಮತ್ತು ಗ್ರೂಪ್-ಬಿ ಹುದ್ದೆಗಳಲ್ಲಿ ಶೇ 75ರಷ್ಟು, ಗ್ರೂಪ್-ಸಿ ಹುದ್ದೆಗಳಲ್ಲಿ ಶೇ 80ರಷ್ಟು ಹಾಗೂ ಗ್ರೂಪ್-ಡಿ ಹುದ್ದೆಗಳಲ್ಲಿ ಶೇ 85ರಷ್ಟು ಹುದ್ದೆಗಳನ್ನು ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸಲು ಅವಕಾಶ ಕಲ್ಪಿಸಲಾಗಿದೆ. ಮುಂದುವರೆದು, ಸದರಿ ಆದೇಶದ ಕಂಡಿಕೆ 13 ರನ್ವಯ ರಾಜ್ಯ ಮಟ್ಟದ ಕಛೇರಿಗಳಲ್ಲಿ ಎಲ್ಲಾ ವೃಂದದ ಹುದ್ದೆಗಳಲ್ಲಿ ಶೇ 8 ರಷ್ಟು ಹುದ್ದೆಗಳನ್ನು ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸಲು ಅವಕಾಶ ಕಲ್ಪಿಸಲಾಗಿದೆ. |
| ಆ) | ಕಲ್ಯಾಣ ಕರ್ನಾಟಕ ಮತ್ತು ಉಳಿಕೆ ವೃಂದ ವಿಭಾಗದಲ್ಲಿ ನೇರ ನೇಮಕಾತಿ ಮಾಡಿಕೊಳ್ಳುವಾಗ ಪ್ರತಿಶತ ಎಷ್ಟು ಪ್ರಮಾಣದ ಹುದ್ದೆಗಳನ್ನು ಕಲ್ಯಾಣ ಕರ್ನಾಟಕ ಭಾಗದ ಅಭ್ಯರ್ಥಿಗಳಿಗೆ ಮೀಸಲಿಡಲಾಗುತ್ತಿದೆ; (ವಿವರ ನೀಡುವುದು) | |
| ಇ) | ಸರ್ಕಾರವು ಕಲ್ಯಾಣ ಕರ್ನಾಟಕ ಮತ್ತು ಉಳಿಕೆ ವೃಂದದಲ್ಲಿ ಪ್ರತ್ಯೇಕ ನೇಮಕಾತಿ ಹೊರಡಿಸಿ, ಪ್ರತ್ಯೇಕ ಲಿಖಿತ ಪರೀಕ್ಷೆ ನಡೆಸಿ ಮತ್ತು ಪ್ರತ್ಯೇಕ ಆಯ್ಕೆ ಪಟ್ಟಿಯನ್ನು ಬಿಡುಗಡೆ ಮಾಡಬೇಕೆಂಬ ಆದೇಶವನ್ನು ಮಾಡಿದ್ದರೂ ಕೂಡ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಈ ನಿಯಮಗಳನ್ನು ಪಾಲಿಸುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು | ಸರ್ಕಾರದ ದಿನಾಂಕ:15.06.2022ರ ಸುತ್ತೋಲೆಯಲ್ಲಿ ವಿವಿಧ ನೇಮಕಾತಿ ಪ್ರಾಧಿಕಾರಗಳು ಇನ್ನು ಮುಂದೆ ಮಿಕ್ಕುಳಿದ ವೃಂದ ಮತ್ತು ಸ್ಥಳೀಯ ವೃಂದದಲ್ಲಿ ಲಭ್ಯವಿರುವ ನೇರ ನೇಮಕಾತಿ ಹುದ್ದೆಗಳಿಗೆ ಅರ್ಜಿ ಆಹ್ವಾನಿಸುವ ಅಧಿಸೂಚನೆಯನ್ನು ಪ್ರತ್ಯೇಕವಾಗಿ ಹೊರಡಿಸಿ ಪ್ರತ್ಯೇಕ ನೇಮಕಾತಿ ಪ್ರಕ್ರಿಯೆ ಕೈಗೊಂಡು ಆಯ್ಕೆಯನ್ನು ಅಂತಿಮಗೊಳಿಸುವಂತೆ ಸೂಚಿಸಲಾಗಿರುತ್ತದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಈ ನಿಯಮಗಳನ್ನು ಪಾಲಿಸುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |

| | | |
|---|---|---|
| ಈ) | 371(ಜೆ) ಮೀಸಲಾತಿಯನ್ನು ಯಾವ ಯಾವ ನೇಮಕಾತಿ ಪ್ರಾಧಿಕಾರಗಳು ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳುವಾಗ ಅನುಸರಿಸಬೇಕೆಂದು ಸರ್ಕಾರ ಆದೇಶಿಸಿದೆ; | ಭಾರತ ಸಂವಿಧಾನದ ಅನುಚ್ಛೇದ 371(ಜೆ)ರಡಿ ಕಲ್ಪಿಸಲಾಗಿರುವ ಮೀಸಲಾತಿಯನ್ನು ರಾಜ್ಯ ಸರ್ಕಾರದ ನಿಯಂತ್ರಣಕ್ಕೊಳಪಡುವ ಎಲ್ಲಾ ಇಲಾಖೆಗಳು/ಕ್ಷೇತ್ರ ಇಲಾಖೆಗಳು/ನಿಗಮ/ ಮಂಡಳಿ/ಸ್ವಾಯತ್ತ ಸಂಸ್ಥೆಗಳು /ಸ್ಥಳೀಯ ಸಂಸ್ಥೆಗಳು ಅನುಸರಿಸಬೇಕಾಗಿದ್ದು, ಮೇಲ್ಕಂಡ ಸಂಸ್ಥೆಗಳಲ್ಲಿ ಮಾಡಿಕೊಳ್ಳುವ ಎಲ್ಲಾ ನೇಮಕಾತಿಯಲ್ಲೂ ಮೀಸಲಾತಿಯನ್ನು ಅನುಸರಿಸಬೇಕಾಗಿರುತ್ತದೆ. |
| (ಉ) | 371(ಜೆ) ಮೀಸಲಾತಿಯನ್ನು ಕರ್ನಾಟಕ ಹಾಲು ಒಕ್ಕೂಟ, ಅಪೆಕ್ಸ್ ಬ್ಯಾಂಕ್ ಮತ್ತು ಡಿಸಿಸಿ ಬ್ಯಾಂಕ್‌ಗಳಲ್ಲಿ ನೇಮಕಾತಿ ಮಾಡಿಕೊಳ್ಳುವಾಗ ಪಾಲಿಸುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ವಿವರ ನೀಡುವುದು? | ಕರ್ನಾಟಕ ಹಾಲು ಒಕ್ಕೂಟ, ಅಪೆಕ್ಸ್ ಬ್ಯಾಂಕ್ ಮತ್ತು ಡಿಸಿಸಿ ಬ್ಯಾಂಕ್‌ಗಳಲ್ಲಿ ಅನುಚ್ಛೇದ 371ಜೆ ಮೀಸಲಾತಿ ಅನ್ವಯವಾಗುವ ಬಗ್ಗೆ ಅಡ್ವೊಕೇಟ್ ಜನರಲ್ ರವರ ಅಭಿಪ್ರಾಯವನ್ನು ಪಡೆಯಲಾಗಿದ್ದು, ಸಹಕಾರ ಸಂಘ ಸಂಸ್ಥೆಗಳು ಸರ್ಕಾರದ ನಿಯಂತ್ರಣಕ್ಕೆ ಒಳಪಡದೇ ಇರುವುದರಿಂದ ಈ ಸಂಸ್ಥೆಗಳಿಗೆ ಅನುಚ್ಛೇದ 371(ಜೆ) ಮೀಸಲಾತಿ ಅನ್ವಯವಾಗುವುದಿಲ್ಲವೆಂದು ಅಭಿಪ್ರಾಯವನ್ನು ನೀಡಿದ್ದು, ಅದರಂತೆ ಕರ್ನಾಟಕ ಹಾಲು ಒಕ್ಕೂಟ, ಅಪೆಕ್ಸ್ ಬ್ಯಾಂಕ್ ಮತ್ತು ಡಿಸಿಸಿ ಬ್ಯಾಂಕ್‌ಗಳಿಗೆ ತಿಳಿಸಲಾಗಿರುತ್ತದೆ. |

ಸಂಖ್ಯೆ:ಸಿಆಸುಇ 107 ಹೈಕಕೋ 2024

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ